ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕ. ವಿ. ಪರಿಷತ್ತು ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 24/9/20

# ಸದನಕ್ಕೆ ಬರಲು ಸಚಿವರಿಗೆ ಭಯವೇ?

ವಿಧಾನ ಪರಿಷತ್ತು: ಕಲಾಪದ ವೇಳೆ ಪ್ರಮುಖ ವಿಷಯಗಳು ಚರ್ಚೆಯಾಗುತ್ತಿರುವಾಗ ಸಂಬಂಧಪಟ್ಟ ಸಚಿವರು ಏಕೆ ಬರುವುದಿಲ್ಲ? ಸದನಕ್ಕೆ ಬರಲು ಅವರಿಗೆ ಭಯವಾಗಿದೆಯೇ? ಎಂದು ಪ್ರತಿಪಕ್ಷದ ಸದಸ್ಯರು ಪ್ರಶ್ನಿಸಿದ್ದಾರೆ.

ವಿಧಾನಪರಿಷತ್ತಿನಲ್ಲಿ ಹಲವು ವಿಧೇಯಕಗಳ ಮಂಡನೆಯಾಗುತ್ತಿದ್ದ ವೇಳೆ ಕಂದಾಯ ಸಚಿವ ಆರ್.ಅಶೋಕ್ ಮಂಡನೆ ಮಾಡಬೇಕಾಗಿದ್ದ ವಿಧೇಯಕವನ್ನು ಸಚಿವ ಜೆ.ಸಿ. ಮಾಧುಸ್ವಾಮಿ ಮಂಡನೆ ಮಾಡಿದ್ದರಿಂದ ಕಾಂಗ್ರೆಸ್ ಸದಸ್ಯ ಸಿ.ಎಂ.ಲಿಂಗಪ್ಪ ಎದ್ದುನಿಂತು, ಈ ಹಿಂದೆ ಎಂ.ಸಿ. ನಾಣಯ್ಯ ಅವರು ಸಚಿವರಾಗಿದ್ದಾಗ ಎಲ್ಲಕ್ಕೂ ಅವರೇ ಉತ್ತರ ನೀಡುತ್ತಿದ್ದರು. ಸಂಬಂಧಪಟ್ಟ ಸಚಿವರು ಸದನಕ್ಕೆ ಹಾಜರಾಗುತ್ತಿರಲಿಲ್ಲ. ಅಧಿವೇಶನ ಇದ್ದಾಗ ಸಚಿವರು ವಿಧಾನಸೌಧಕ್ಕೆ ಬರುತ್ತಿದ್ದರು. ಆದರೆ, ಸದನಕ್ಕೆ ಬರುತ್ತಿರಲಿಲ್ಲ. ಈ ಬಗ್ಗೆ ಪರಿಶೀಲನೆ ಮಾಡಿದಾಗ ಸಚಿವರು ಸ್ಪೀಕರ್ ಕೊಠಡಿಯಲ್ಲಿ ಕುಳಿತು ಕಲಾಪದಲ್ಲಿ ಏನಾಗುತ್ತದೆ ಎಂಬುದನ್ನು ಗಮನಿಸುತ್ತಿದ್ದರು. ಹಾಗೆಯೇ ಈಗಿನ ಸಚಿವರು ಕೂಡ ಬರದೇ ತಪ್ಪಿಸಿಕೊಳ್ಳುತ್ತಿದ್ದಾರೇನೋ ಎಂಬ ಅನುಮಾನ ಕಾಡುತ್ತಿದೆ ಎಂದರು. ಇದಕ್ಕೆ ಸಚಿವ ಮಾಧುಸ್ವಾಮಿ ಪ್ರತಿಕ್ರಿಯಿಸಿ, ನಾವು ಹಾಗೆಲ್ಲ ಜವಾಬ್ದಾರಿಯಿಂದ ನುಣುಚಿಕೊಳ್ಳುವುದಿಲ್ಲ. ಸಚಿವರು ಕೆಳಮನೆಯಲ್ಲಿ ಉತ್ತರ ಕೊಡುತ್ತಿದ್ದಾರೆ. ಇದರಿಂದಾಗಿ ನಾನೇ ವಿಧೇಯಕ ಮಂಡನೆ ಮಾಡುತ್ತಿದ್ದೇನೆ ಎಂದರು.